**National**
**Kannada**
**24.08.2025 7.35am.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**ಮುಖ್ಯಾಂಶಗಳು**

೧. ನಿಧಾನಗತಿಯ ಬೆಳವಣಿಗೆಯಿಂದ ಜಗತ್ತನ್ನು ಮೇಲೆತ್ತುವಲ್ಲಿ ಭಾರತದ ಪಾತ್ರ ನಿರ್ಣಾಯಕ- ಪ್ರಧಾನಿ ನರೇಂದ್ರ ಮೋದಿ

೨. ಎರಡು ದಿನಗಳ ಅಖಿಲ ಭಾರತ ಸ್ಪೀಕರ್‌ಗಳ ಸಮ್ಮೇಳನಕ್ಕೆ ಇಂದು ಕೇಂದ್ರ ಸಚಿವ ಅಮಿತ್ ಶಾ ಚಾಲನೆ

೩. ಇಂದಿನಿಂದ ಮೂರು ದಿನಗಳ ಕಾಲ ಭಾರತ ಪ್ರವಾಸ ಕೈಗೊಳ್ಳಲಿರುವ ಫಿಜಿ ಪ್ರಧಾನಿ

೪. ನಾರ್ತ್ ಈಸ್ಟ್ ಯುನೈಟೆಡ್ ಫುಟ್‌ಬಾಲ್ ಕ್ಲಬ್‌ಗೆ ಒಲಿದ ಡುರಾಂಡ್ ಕಪ್ ಟ್ರೋಫಿ

><><><><><><><><><

ಸುಧಾರಣೆ, ಕಾರ್ಯಕ್ಷಮತೆ ಮತ್ತು ಪರಿವರ್ತನೆ ಎಂಬ ಮಂತ್ರದಿಂದ ಮಾರ್ಗದರ್ಶನ ಪಡೆದ ಭಾರತವು ನಿಧಾನಗತಿಯ ಬೆಳವಣಿಗೆಯಿಂದ ಜಗತ್ತನ್ನು ಮೇಲೆತ್ತಲು ಸಹಾಯ ಮಾಡುವ ನಿರ್ಣಾಯಕ ಸ್ಥಾನದಲ್ಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ವಿಶ್ವ ನಾಯಕರ ವೇದಿಕೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಭಾರತ ಶೀಘ್ರದಲ್ಲೇ ವಿಶ್ವದ ಮೂರನೇ ಅತಿದೊಡ್ಡ ಪ್ರಮುಖ ಆರ್ಥಿಕತೆಯಾಗಲಿದೆ ಮತ್ತು ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಹಾದಿಯಲ್ಲಿದೆ ಎಂದರು.

ಕಾನೂನನ್ನು ಸರಳಗೊಳಿಸುವ ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣಾ ಪ್ರಕ್ರಿಯೆಯನ್ನು ದೀಪಾವಳಿಗೆ ಮುಂಚಿತವಾಗಿ ಪೂರ್ಣಗೊಳಿಸಲಾಗುವುದು ಮತ್ತು ಬೆಲೆಗಳನ್ನು ಕಡಿಮೆ ಮಾಡಲಾಗುವುದು ಎಂದು ಪ್ರಧಾನಿ ಮೋದಿ ಹೇಳಿದರು. ಶುದ್ಧ ಇಂಧನ, ಕ್ವಾಂಟಮ್ ತಂತ್ರಜ್ಞಾನ, ಬ್ಯಾಟರಿ ಸಂಗ್ರಹಣೆ, ಸುಧಾರಿತ ವಸ್ತುಗಳು ಮತ್ತು ಜೈವಿಕ ತಂತ್ರಜ್ಞಾನದಂತಹ ಕ್ಷೇತ್ರಗಳಲ್ಲಿ ಸಂಶೋಧನೆ ಮತ್ತು ಅಭಿವೃದ್ಧಿಯಲ್ಲಿ ಹೂಡಿಕೆಯನ್ನು ಹೆಚ್ಚಿಸುವಂತೆ ಖಾಸಗಿ ವಲಯಕ್ಕೆ ಪ್ರಧಾನಿ ಕರೆ ನೀಡಿದರು. ಇದು ಅಭಿವೃದ್ಧಿ ಹೊಂದಿದ ಭಾರತದ ಸಂಕಲ್ಪವನ್ನು ಬಲಪಡಿಸುತ್ತದೆ. ಸರ್ಕಾರವು ಸಮಗ್ರ ಹೊಸ ಸುಧಾರಣೆಗಳನ್ನು ತರಲಿದೆ ಎಂದು ಪ್ರಧಾನಿ ಹೇಳಿದರು. ಮುಂದಿನ ಪೀಳಿಗೆಯ ಸುಧಾರಣೆಗಳ ಈ ಶಸ್ತ್ರಾಗಾರದೊಂದಿಗೆ, ಭಾರತದಲ್ಲಿ ಉತ್ಪಾದನೆ ಹೆಚ್ಚಾಗುತ್ತದೆ, ಮಾರುಕಟ್ಟೆ

ಬೇಡಿಕೆ ಹೆಚ್ಚಾಗುತ್ತದೆ, ಉದ್ಯಮವು ಹೊಸ ಉತ್ತೇಜನವನ್ನು ಪಡೆಯುತ್ತದೆ, ಹೊಸ ಉದ್ಯೋಗಾವಕಾಶಗಳು ಸೃಷ್ಟಿಯಾಗುತ್ತವೆ ಮತ್ತು ಜೀವನ ಸುಲಭತೆ ಮತ್ತು ವ್ಯವಹಾರ ಸುಲಭತೆ ಎರಡೂ ಸುಧಾರಿಸುತ್ತವೆ ಎಂದು ಅವರು ಗಮನಸೆಳೆದರು. ಆರ್ಥಿಕತೆಯ ಮೂಲ ಅಂಶಗಳ ಬಗ್ಗೆ ಮಾತನಾಡಿದ ಪ್ರಧಾನಿ ಮೋದಿ, ಭಾರತೀಯ ಕಂಪನಿಗಳು ಬಂಡವಾಳ ಮಾರುಕಟ್ಟೆಗಳಿಂದ ದಾಖಲೆಯ ಹಣವನ್ನು ಸಂಗ್ರಹಿಸುತ್ತಿವೆ. ಬ್ಯಾಂಕುಗಳು ಹಿಂದೆಂದಿಗಿಂತಲೂ ಬಲಿಷ್ಠವಾಗಿವೆ, ಹಣದುಬ್ಬರವು ತುಂಬಾ ಕಡಿಮೆಯಾಗಿದೆ ಮತ್ತು ಬಡ್ಡಿದರಗಳು ಸಹ ಕಡಿಮೆಯಾಗಿದೆ ಎಂದರು. ಚಾಲ್ತಿ ಖಾತೆ ಕೊರತೆ ನಿಯಂತ್ರಣದಲ್ಲಿದೆ, ವಿದೇಶೀ ವಿನಿಮಯ ಮೀಸಲು ಸಹ ಬಲಿಷ್ಠವಾಗಿವೆ. ಪ್ರತಿ ತಿಂಗಳು ಲಕ್ಷಾಂತರ ದೇಶೀಯ ಹೂಡಿಕೆದಾರರು ಎಸ್‌ಐಪಿ ಗಳ ಮೂಲಕ ಮಾರುಕಟ್ಟೆಯಲ್ಲಿ ಸಾವಿರಾರು ಕೋಟಿ ರೂಪಾಯಿಗಳನ್ನು ಹೂಡಿಕೆ ಮಾಡುತ್ತಿದ್ದಾರೆ ಎಂದು ಪ್ರಧಾನಿ ತಿಳಿಸಿದರು. ೨೦೪೭ ರ ವೇಳೆಗೆ ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಗುರಿಯತ್ತ ಭಾರತವು ಪೂರ್ಣ ಶಕ್ತಿಯಿಂದ ಕೆಲಸ ಮಾಡುತ್ತಿದೆ ಮತ್ತು ಅಭಿವೃದ್ಧಿ ಹೊಂದಿದ ಭಾರತದ ಆಧಾರವು ಸ್ವಾವಲಂಬಿ ಭಾರತವಾಗಿದೆ ಎಂದು ಅವರು ಹೇಳಿದರು. ಸ್ವಾವಲಂಬಿ ಭಾರತಕ್ಕಾಗಿ ದೇಶವು ಮೂರು ನಿಯತಾಂಕಗಳ ಮೇಲೆ ಗಮನಹರಿಸಬೇಕಾಗಿದೆ. ಭಾರತವು ತನ್ನ ಸಂಪೂರ್ಣ ೫ಜಿ ಸ್ಟ್ಯಾಕ್ ಅನ್ನು ದೇಶೀಯವಾಗಿ ಅಭಿವೃದ್ಧಿಪಡಿಸಿದೆ ಮತ್ತು ಈಗ ಮೇಡ್-ಇನ್-ಇಂಡಿಯಾ ೬ಜಿ ತಂತ್ರಜ್ಞಾನದಲ್ಲಿ ವೇಗವಾಗಿ ಕಾರ್ಯನಿರ್ವಹಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದರು.

><><><><><><><><

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಇಂದು ರಾಷ್ಟ್ರ ರಾಜಧಾನಿಯ ದೆಹಲಿ ವಿಧಾನಸಭೆಯಲ್ಲಿ ಎರಡು ದಿನಗಳ ಅಖಿಲ ಭಾರತ ಸ್ಪೀಕರ್‌ಗಳ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ದೇಶದಲ್ಲಿ ಮೊದಲ ಚುನಾಯಿತ ಸ್ಪೀಕರ್ ಆಗಿ ವಿಠಲಭಾಯಿ ಪಟೇಲ್ ಕೇಂದ್ರ ವಿಧಾನಸಭೆಯ ಸ್ಪೀಕರ್ ಆಗಿ ಅಧಿಕಾರ ವಹಿಸಿಕೊಂಡ ಶತಮಾನೋತ್ಸವದ ಸ್ಮರಣಾರ್ಥ ಈ ಸಮ್ಮೇಳನವನ್ನು ಆಯೋಜಿಸಲಾಗುತ್ತಿದೆ. ೨೯ ರಾಜ್ಯ ವಿಧಾನಸಭೆಗಳ ಸ್ಪೀಕರ್‌ಗಳು ಮತ್ತು ಆರು ರಾಜ್ಯಗಳ ವಿಧಾನ ಪರಿಷತ್ತಿನ ಸಭಾಪತಿಗಳು ಮತ್ತು ಉಪಸಭಾಪತಿಗಳು ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ. ವಿಠಲಭಾಯಿ ಪಟೇಲ್ ಅವರ ಜೀವನ, ಸಂಸದೀಯ ಕೊಡುಗೆ ಮತ್ತು ಸ್ವಾತಂತ್ರ್ಯ ಹೋರಾಟದಲ್ಲಿ ಅವರ ಪಾತ್ರವನ್ನು ಆಧರಿಸಿದ ಪ್ರದರ್ಶನ, ವಿಶೇಷ ಸಾಕ್ಷ್ಯಚಿತ್ರ ಮತ್ತು ಸ್ಮರಣಾರ್ಥ ಅಂಚೆ ಚೀಟಿಯನ್ನು ಬಿಡುಗಡೆ ಮಾಡಲಾಗುವುದು ಎಂದು ದೆಹಲಿ ವಿಧಾನಸಭೆ ಸ್ಪೀಕರ್ ವಿಜೇಂದರ್ ಗುಪ್ತಾ ಮಾಹಿತಿ ನೀಡಿದ್ದಾರೆ.

><><><><><><><><

ಫಿಜಿ ಪ್ರಧಾನಿ ಸಿತಿವೇನಿ ಲಿಗಮಮದ ರಬುಕ ಅವರು ಇಂದಿನಿಂದ ಮೂರು ದಿನಗಳ ಕಾಲ ಭಾರತಕ್ಕೆ ಭೇಟಿ ನೀಡಲಿದ್ದಾರೆ. ಫಿಜಿ ನಿಯೋಗದಲ್ಲಿ ಆರೋಗ್ಯ ಮತ್ತು ವೈದ್ಯಕೀಯ ಸೇವೆಗಳ ಸಚಿವ ರತು ಅಟೋನಿಯೊ ಲಾಲಬಲವು ಮತ್ತು ಹಿರಿಯ ಅಧಿಕಾರಿಗಳು ಇರಲಿದ್ದಾರೆ. ಪ್ರಧಾನಿ ರಬುಕ ಅವರು ತಮ್ಮ ಪ್ರಸ್ತುತ ಅವಧಿಯಲ್ಲಿ ಭಾರತಕ್ಕೆ ನೀಡುತ್ತಿರುವ ಮೊದಲ ಭೇಟಿ ಇದಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ನವದೆಹಲಿಯಲ್ಲಿ ನಾಳೆ ಅವರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಬಳಿಕ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿ ಮಾಡಲಿದ್ದಾರೆ. ಈ ಭೇಟಿ ಭಾರತ ಮತ್ತು ಫಿಜಿ ನಡುವಿನ ದೀರ್ಘಕಾಲಿನ ಮತ್ತು ಶಾಶ್ವತ ಸಂಬಂಧಗಳನ್ನು ಒತ್ತಿ ಹೇಳುತ್ತದೆ.

><><><><><><><><><

ಮಾಹಿತಿ ಸಚಿವಾಲಯದ ಅಡಿಯಲ್ಲಿರುವ ಅಂಚೆ ಇಲಾಖೆಯು ಆಗಸ್ಟ್ ೨೫ರಿಂದ ಅಮೆರಿಕಾಗೆ ಎಲ್ಲಾ ಅಂಚೆ ವಸ್ತುಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲು ನಿರ್ಧರಿಸಿದೆ. ಈ ತಿಂಗಳ ೨೯ರಿಂದ ಜಾರಿಗೆ ಬರುವಂತೆ ೮೦೦ ಡಾಲರ್ ವರೆಗಿನ ಸರಕುಗಳಿಗೆ ಸುಂಕ ಮುಕ್ತ ವಿನಾಯಿತಿಯನ್ನು ಹಿಂತೆಗೆದುಕೊಳ್ಳುವ ಅಮೆರಿಕ ಸರ್ಕಾರದ ಕಾರ್ಯಕಾರಿ ಆದೇಶದ ನಂತರ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಅಮೆರಿಕಗೆ ಸಂಬಂಧಿಸಿದ ಎಲ್ಲಾ ಅಂತಾರಾಷ್ಟ್ರೀಯ ಅಂಚೆ ವಸ್ತುಗಳು, ಅವುಗಳ ಮೌಲ್ಯವನ್ನು ಲೆಕ್ಕಿಸದೆ ಕಸ್ಟಮ್ಸ್ ಸುಂಕಗಳಿಗೆ ಒಳಪಟ್ಟಿರುತ್ತವೆ ಹಾಗೂ ನೂರು ಡಾಲರ್ ವರೆಗಿನ ವಸ್ತುಗಳಿಗೆ ಸುಂಕಗಳಿಂದ ವಿನಾಯಿತಿ ಇರಲಿದೆ ಎಂದು ಮಾಹಿತಿ ಸಚಿವಾಲಯ ತಿಳಿಸಿದೆ. ಅಂಚೆ ಇಲಾಖೆಯು ಸಾಧ್ಯವಾದಷ್ಟು ಬೇಗ ಸೇವೆಗಳನ್ನು ಸಾಮಾನ್ಯಗೊಳಿಸಲು ಪ್ರಯತ್ನಿಸುತ್ತಿದೆ. ಈ ಸಂದರ್ಭಗಳಿಂದಾಗಿ ಅಮೆರಿಕಾಗೆ ರವಾನಿಸಲಾಗುವ ವಸ್ತುಗಳನ್ನು ಈಗಾಗಲೇ ಬುಕ್ ಮಾಡಿದ ಗ್ರಾಹಕರು, ಅಂಚೆಯ ಮರುಪಾವತಿಯನ್ನು ಪಡೆಯಬಹುದು ಮತ್ತು ಗ್ರಾಹಕರಿಗೆ ಉಂಟಾದ ಅನಾನುಕೂಲತೆಗೆ ಅಂಚೆ ಇಲಾಖೆ ವಿಷಾದ ವ್ಯಕ್ತಪಡಿಸಿದೆ.

><><><><><><><><><

ಪ್ರಧಾನ ಮಂತ್ರಿ ನರೇಂದ್ರ ಮೋದಿ ನಾಳೆ ಮತ್ತು ನಾಡಿದ್ದು ಗುಜರಾತ್‌ಗೆ ಭೇಟಿ ನೀಡಲಿದ್ದು, ಹಲವಾರು ಮಹತ್ವದ ಅಭಿವೃದ್ಧಿ ಯೋಜನೆಗಳಿಗೆ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ೧ ಸಾವಿರದ ೨೦೦ ಕೋಟಿ ರೂಪಾಯಿಗಳಿಗೂ ಹೆಚ್ಚಿನ ಸಂಯೋಜಿತ ಹೂಡಿಕೆಯೊಂದಿಗೆ ಈ ಯೋಜನೆಗಳು, ಅಹಮದಾಬಾದ್, ಮೆಹ್ಸಾನಾ ಮತ್ತು ಗಾಂಧಿನಗರದಲ್ಲಿ ಮೂಲಸೌಕರ್ಯವನ್ನು ಆಧುನೀಕರಿಸುವುದು, ವಿದ್ಯುತ್ ವಿತರಣೆಯನ್ನು ಹೆಚ್ಚಿಸುವುದು ಮತ್ತು ನಾಗರಿಕ ಸೇವೆಗಳನ್ನು ಸುಧಾರಿಸುವ ಗುರಿಯನ್ನು ಹೊಂದಿವೆ. ತಮ್ಮ ಭೇಟಿಯ ಸಮಯದಲ್ಲಿ,

ಪ್ರಧಾನಿಯವರು ಅಹಮದಾಬಾದ್, ಮೆಹ್ಸಾನಾ ಮತ್ತು ಗಾಂಧಿನಗರ ಜಿಲ್ಲೆಗಳಲ್ಲಿ ಉತ್ತರ ಗುಜರಾತ್ ವಿಜ್ ಕಂಪನಿ ಲಿಮಿಟೆಡ್ ಮತ್ತು ಗುಜರಾತ್ ಎನರ್ಜಿ ಟ್ರಾನ್ಸ್‌ಮಿ?ನ್ ಕಾರ್ಪೊರೇ?ನ್ ಲಿಮಿಟೆಡ್‌ನ ಐದು ಪ್ರಮುಖ ವಿದ್ಯುತ್ ವಿತರಣಾ ಯೋಜನೆಗಳನ್ನು ಉದ್ಘಾಟಿಸಲಿದ್ದಾರೆ. ಒಟ್ಟು ೧ ಸಾವಿರದ ೧೨೨ ಕೋಟಿ ರೂಪಾಯಿಗಳ ಈ ಯೋಜನೆಗಳು, ವಿದ್ಯುತ್ ವಿತರಣಾ ಜಾಲಗಳನ್ನು ಆಧುನೀಕರಿಸುವ ಮತ್ತು ಸ್ಥಳಾಂತರಿಸುವ ಮೂಲಕ ಸುಮಾರು ೪.೨೫ ಲಕ್ಷ ಗ್ರಾಹಕರಿಗೆ ಪ್ರಯೋಜನವನ್ನು ನೀಡಲು ವಿನ್ಯಾಸಗೊಳಿಸಲಾಗಿದೆ. ಇದರಿಂದಾಗಿ ಸುರಕ್ಷತೆ, ವಿಶ್ವಾಸಾರ್ಹತೆ ಮತ್ತು ದಕ್ಷತೆಯನ್ನು ಸುಧಾರಣೆಯಾಗಲಿದೆ. ಇದೇ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು ೯೭ ಕೋಟಿ ರೂಪಾಯಿ ಮೌಲ್ಯದ ಎರಡು ಅತ್ಯಾಧುನಿಕ ಕಂದಾಯ ಇಲಾಖೆಯ ಕಟ್ಟಡಗಳಿಗೆ ಅಡಿಪಾಯ ಹಾಕಲಿದ್ದಾರೆ.

><><><><><><><><

ನಾರ್ತ್ ಈಸ್ಟ್ ಯುನೈಟೆಡ್ ಫುಟ್‌ಬಾಲ್ ಕ್ಲಬ್ ಡುರಾಂಡ್ ಕಪ್ ಟ್ರೋಫಿಯನ್ನು ತನ್ನಲ್ಲೇ ಉಳಿಸಿಕೊಂಡಿದೆ. ಕೋಲ್ಕತ್ತಾದ ಯುವ ಭಾರತಿ ಕ್ರೀಡಾಂಗಣದಲ್ಲಿ ನಿನ್ನೆ ನಡೆದ ಫೈನಲ್‌ನಲ್ಲಿ, ಡೈಮಂಡ್ ಹಾರ್ಬರ್ ಫುಟ್‌ಬಾಲ್ ಕ್ಲಬ್ ವಿರುದ್ಧ ೭-೧ ಅಂತರದಿಂದ ನಾರ್ತ್ ಈಸ್ಟ್ ಯುನೈಟೆಡ್ ಫುಟ್‌ಬಾಲ್ ಕ್ಲಬ್ ಭರ್ಜರಿ ಜಯ ಸಾಧಿಸಿದೆ.

><><><><><><><><

ಜಮ್ಮು ಮತ್ತು ಕಾಶ್ಮೀರದ ದಾಲ್ ಸರೋವರದಲ್ಲಿ ನಡೆದ ಮೂರು ದಿನಗಳ 'ಖೇಲೋ ಇಂಡಿಯಾ ಜಲ ಕ್ರೀಡಾ ಉತ್ಸವ' ನಿನ್ನೆ ಸಂಜೆ ಮುಕ್ತಾಯಗೊಂಡಿತು. ಶ್ರೀನಗರದಲ್ಲಿ ನಡೆದ ಮೊದಲ ಖೇಲೋ ಇಂಡಿಯಾ ಜಲ ಕ್ರೀಡಾ ಉತ್ಸವದಲ್ಲಿ ಮಧ್ಯಪ್ರದೇಶ ೧೦ ಚಿನ್ನದ ಪದಕಗಳು ಸೇರಿದಂತೆ ೧೮ ಪದಕಗಳನ್ನು ಗೆಲ್ಲುವ ಮೂಲಕ ಅಗ್ರಸ್ಥಾನ ಗಳಿಸಿತು ಮತ್ತು ತಂಡ ಚಾಂಪಿಯನ್‌ಶಿಪ್ ಗೆದ್ದು ಪದಕ ಪಟ್ಟಿಯಲ್ಲಿ ಅಗ್ರಸ್ಥಾನ ಗಳಿಸಿತು. ಇದರಲ್ಲಿ ಮೂರು ಬೆಳ್ಳಿ ಮತ್ತು ಐದು ಕಂಚಿನ ಪದಕಗಳು ಸೇರಿವೆ. ಭಾರತೀಯ ಕ್ರೀಡಾ ಪ್ರಾಧಿಕಾರ ಹಾಗೂ ಜಮ್ಮು ಮತ್ತು ಕಾಶ್ಮೀರ ಕ್ರೀಡಾ ಮಂಡಳಿ ಜಂಟಿಯಾಗಿ ಈ ಕಾರ್ಯಕ್ರಮವನ್ನು ಆಯೋಜಿಸಿತ್ತು.

><><><><><><><><

೧೪೫ನೇ ಆವೃತ್ತಿಯ ಯುಎಸ್ ಓಪನ್ ಟೆನಿಸ್ ಇಂದು ನ್ಯೂಯಾರ್ಕ್‌ನ ಯುಎಸ್‌ಟಿಎ ಬಿಲ್ಲಿ ಜೀನ್ ಕಿಂಗ್ ರಾಷ್ಟ್ರೀಯ ಟೆನಿಸ್ ಕೇಂದ್ರದಲ್ಲಿ ಆರಂಭವಾಗಲಿದೆ. ಪುರುಷರ ಸಿಂಗಲ್ಸ್‌ನಲ್ಲಿ ವಿಶ್ವದ ನಂ.೧ ಮತ್ತು ಹಾಲಿ ಚಾಂಪಿಯನ್ ಇಟಲಿಯ ಜಾನಿಕ್ ಸಿನ್ನರ್ ಮುನ್ನಡೆಸಲಿದ್ದಾರೆ. ಸ್ಪೇನ್‌ನ ಕಾರ್ಲೋಸ್ ಅಲ್ಕರಾಜ್, ನಾಲ್ಕು ಬಾರಿ ಯುಎಸ್ ಓಪನ್ ವಿಜೇತ ನೊವಾಕ್ ಜೊಕೊವಿಕ್ ಮತ್ತು ಜರ್ಮನಿಯ ಅಲೆಕ್ಸಾಂಡರ್ ಜ್ವೆರೆವ್ ಪಂದ್ಯಾವಳಿಯಲ್ಲಿ ಭಾಗವಹಿಸುವ ಪ್ರಮುಖ ಆಟಗಾರರಾಗಿದ್ದಾರೆ.

><><><><><><><><><